## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 491 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)) |
| ಉತ್ತರಿಸಬೇಕಾದ ದಿನಾಂಕ | : | 19.02.2024 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿ ಪ್ರಸ್ತುತ ಬಿ.ಪಿ.ಎಲ್ ಪಡಿತರ ಚೀಟಿಗಳನ್ನು ಹೊಂದಿರುವ ಕುಟುಂಬಗಳ ಸಂಖ್ಯೆ ಎಷ್ಟು; ಇಲ್ಲಿಯವರೆಗೆ ಬಿ.ಪಿ.ಎಲ್ ಪಡಿತರ ಚೀಟಿಗಾಗಿ ಒಟ್ಟು ಸಲ್ಲಿಸಿರುವ ಕುಟುಂಬಗಳ ಸಂಖ್ಯೆ ಎಷ್ಟು; ಅರ್ಜಿ ಸಲ್ಲಿಸಿದ ಎಷ್ಟು ದಿನದೊಳಗೆ ಪಡಿತರ ಚೀಟಿ ವಿತರಣೆ ಮಾಡಲಾಗುವುದು; (ಈ ಕುರಿತು ಮಾಹಿತಿ ನೀಡುವುದು)</td><td>ರಾಜ್ಯದಲ್ಲಿ ಚಾಲ್ತಿಯಲ್ಲಿರುವ ಪಡಿತರ ಚೀಟಿಗಳ ವಿವರ ಈ ಕೆಳಕಂಡಂತಿರುತ್ತವೆ.
<table>
<tr><th>ಪಡಿತರ ಚೀಟಿ</th><th>ಪಡಿತರ ಚೀಟಿ ಸಂಖ್ಯೆ</th><th>ಫಲಾನುಭವಿಗಳ ಸಂಖ್ಯೆ</th></tr>
<tr><td>ಅಂತ್ಯೋದಯ ಪಡಿತರ ಚೀಟಿ</td><td>10,84,694</td><td>44,02,005</td></tr>
<tr><td>ಆದ್ಯತಾ ಪಡಿತರ ಚೀಟಿ</td><td>1,16,66,233</td><td>3,94,18,190</td></tr>
<tr><td>ಒಟ್ಟು</td><td>1,27,50,927</td><td>4,38,20,195</td></tr>
</table>
2017 ರಿಂದ ಒಟ್ಟು 39,35,556 ಆದ್ಯತಾ ಪಡಿತರ ಚೀಟಿ ಕೋರಿ ಅರ್ಜಿ ಸಲ್ಲಿಕೆಯಾಗಿದ್ದು ಇದರಲ್ಲಿ 36,61,690 ಅರ್ಜಿಗಳು ವಿಲೇಯಾಗಿದ್ದು 2,73,866 ಅರ್ಜಿಗಳು ವಿಲೇಗೆ ಬಾಕಿ ಇರುತ್ತದೆ.<br>ಹೊಸ ಆದ್ಯತಾ ಪಡಿತರ ಚೀಟಿಯನ್ನು ಕೋರಿ ಸಲ್ಲಿಸಿರುವ ಅರ್ಜಿಗಳ ಬಾಕಿ ಇರುವ 2,95,986 ಅರ್ಜಿಗಳ ವಿಲೇವಾರಿ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್‌ಎ 2021, ದಿನಾಂಕ: 29.09.2023 ರನ್ವಯ ಆದೇಶಿಸಲಾಗಿರುತ್ತದೆ. ಸರ್ಕಾರದ ಆದೇಶದಂತೆ ಬಾಕಿ ಇರುವ ಹೊಸ ಆದ್ಯತಾ ಪಡಿತರ ಚೀಟಿಗಳನ್ನು ವಿಲೇವಾರಿ ಮಾಡಲು ರಾಜ್ಯದ ಎಲ್ಲಾ ಜಂಟಿ/ ಉಪ ನಿರ್ದೇಶಕರಿಗೆ ನಿರ್ದೇಶನ ನೀಡಲಾಗಿರುತ್ತದೆ. ಹೊಸ ಆದ್ಯತಾ ಪಡಿತರ ಚೀಟಿಗಳ ವಿಲೇವಾರಿ ಕಾರ್ಯ ಪ್ರಗತಿಯಲ್ಲಿರುತ್ತದೆ. ಈವರೆಗೆ 58305 ಅರ್ಜಿಗಳಿಗೆ ಅನುಮೋದನೆ ನೀಡಲಾಗಿರುತ್ತದೆ.</td></tr>
</table>

| | | |
|---|---|---|
| ಆ | ಏಪ್ರಿಲ್ 01-2023 ರಿಂದ ಬಡತನ ರೇಖೆಗಿಂತ ಕೆಳಗಿರುವ ಜನರು ಬಿ.ಪಿ.ಎಲ್, ಎ.ಪಿ.ಎಲ್, ಮತ್ತು ಅಂತ್ಯೋದಯ ಪಡಿತರ ಚೀಟಿಗಾಗಿ ಸರ್ಕಾರಕ್ಕೆ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು; ಸಲ್ಲಿಸಿದ ಅರ್ಜಿಗಳನ್ವಯ ಎಷ್ಟು ಕುಟುಂಬಗಳಿಗೆ ಪಡಿತರ ಚೀಟಿ ವಿರಿಸಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು) | 01.01.2023 ರಿಂದ ಒಟ್ಟು 48632 ಆದ್ಯತಾ ಪಡಿತರ ಚೀಟಿ ಅರ್ಜಿಗಳು ಸಲ್ಲಿಕೆಯಾಗಿರುತ್ತವೆ. ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್ಎ 2021, ದಿನಾಂಕ: 29.09.2023 ರನ್ವಯ 2023 ರ ಮಾರ್ಚ್ ಮಾಹೆವರೆಗು ಸಲ್ಲಿಸಲಾದ ಅರ್ಜಿಗಳನ್ನು ವಿಲೇವಾರಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಅದರನ್ವಯ ಸದರಿ ಅರ್ಜಿಗಳ ವಿಲೇವಾರಿ ಕಾರ್ಯ ಪ್ರಗತಿಯಲ್ಲಿರುತ್ತದೆ.<br>ಏಪ್ರಿಲ್-01-2023ರಿಂದ ಇಲ್ಲಿಯವರೆಗೆ ಬಾಕಿ ಉಳಿದಿರುವ ಅರ್ಜಿಗಳನ್ನು ವಿಲೇಗೊಳಿಸುವ ಬಗ್ಗೆ ಈ ಹಿಂದೆ ಅರ್ಜಿ ಸಲ್ಲಿಸಿ ಬಾಕಿ ಇರುವ 2,95,986 ಅರ್ಜಿಗಳ ವಿಲೇವಾರಿ ಕಾರ್ಯ ಮುಗಿದ ನಂತರ ಸದರಿ 48,632 ಅರ್ಜಿಗಳ ವಿಲೇವಾರಿ ಮಾಡಲು ಕ್ರಮವಹಿಸಲಾಗುತ್ತದೆ. |
| ಇ | ಬಿ.ಪಿ.ಎಲ್, ಎ.ಪಿ.ಎಲ್ ಮತ್ತು ಅಂತ್ಯೋದಯ ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿದ್ದರೂ ಸಹ ಇಲ್ಲಿಯವರೆಗೂ ಕೆಲ ಕುಟುಂಬಗಳಿಗೆ ಪಡಿತರ ಚೀಟಿ ದೊರಕದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಹೊಸ ಆದ್ಯತಾ ಪಡಿತರ ಚೀಟಿಯನ್ನು ಕೋರಿ ಸಲ್ಲಿಸಿರುವ ಅರ್ಜಿಗಳ ಬಾಕಿ ಇರುವ 2,95,986 ಅರ್ಜಿಗಳ ವಿಲೇವಾರಿ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್ಎ 2021, ದಿನಾಂಕ: 29.09.2023 ರನ್ವಯ ಆದೇಶಿಸಲಾಗಿರುತ್ತದೆ. ಸರ್ಕಾರದ ಆದೇಶದಂತೆ ಬಾಕಿ ಇರುವ ಹೊಸ ಆದ್ಯತಾ ಪಡಿತರ ಚೀಟಿಗಳನ್ನು ವಿಲೇವಾರಿ ಮಾಡಲು ರಾಜ್ಯದ ಎಲ್ಲಾ ಜಂಟಿ/ ಉಪ ನಿರ್ದೇಶಕರಿಗೆ ನಿರ್ದೇಶನ ನೀಡಲಾಗಿರುತ್ತದೆ. ಹೊಸ ಆದ್ಯತಾ ಪಡಿತರ ಚೀಟಿಗಳ ವಿಲೇವಾರಿ ಕಾರ್ಯ ಪ್ರಗತಿಯಲ್ಲಿರುತ್ತದೆ. ಈವರೆಗೆ 58,305 ಅರ್ಜಿಗಳಿಗೆ ಅನುಮೋದನೆ ನೀಡಲಾಗಿರುತ್ತದೆ. |
| ಈ | ಸಲ್ಲಿಕೆಯಾಗಿರುವ ಅರ್ಜಿಗಳನ್ವಯ ಎಷ್ಟು ಬಿ.ಪಿ.ಎಲ್, ಎ.ಪಿ.ಎಲ್, ಮತ್ತು ಅಂತ್ಯೋದಯ ಪಡಿತರ ಚೀಟಿಗಳನ್ನು ವಿತರಿಸಲಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು) | 2017 ರಿಂದ ಒಟ್ಟು 39,35,556 ಆದ್ಯತಾ ಪಡಿತರ ಚೀಟಿ ಕೋರಿ ಅರ್ಜಿ ಸಲ್ಲಿಕೆಯಾಗಿದ್ದು ಇದರಲ್ಲಿ 36,61,690 ಅರ್ಜಿಗಳು ವಿಲೇಯಾಗಿದ್ದು 2,73,866 ಅರ್ಜಿಗಳು ವಿಲೇಗೆ ಬಾಕಿ ಇರುತ್ತದೆ. |
| ಉ | ಒಂದು ವೇಳೆ ಬಿ.ಪಿ.ಎಲ್, ಎ.ಪಿ.ಎಲ್, ಮತ್ತು ಅಂತ್ಯೋದಯ ಪಡಿತರ ಚೀಟಿಗಾಗಿ ಸಲ್ಲಿಸಿದ ಅರ್ಜಿಗಳನ್ನು ಯಾವ ನಿಯಮಾನುಸಾರ ತಿರಸ್ಕರಿಸಲಾಗುವುದು; ತಿರಸ್ಕರಿಸುವ ಅಧಿಕಾರ ಯಾರಿಗೆ ನೀಡಲಾಗಿದೆ? (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು) | ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು 2017 ರಲ್ಲಿ ಹೊರಡಿಸಿರುವ ಮಾನದಂಡಗಳನ್ನು ರೂಪಿಸಿದೆ.<br>• ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ |

| | | |
|---|---|---|
| | | ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ ನಿಗಮಗಳು/ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ಜಿಎಸ್‌ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>• ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>• ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>• ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.<br>ಸದರಿ ಮಾನದಂಡಗಳ ಆಧಾರದ ಮೇಲೆ ಅರ್ಜಿಗಳನ್ನು ಪುರಸ್ಕರಿಸುವ /ತಿರಸ್ಕರಿಸುವ ಅಧಿಕಾರವನ್ನು ಸಂಬಂಧಪಟ್ಟ ತಾಲ್ಲೂಕಿನ ಆಹಾರ ನಿರೀಕ್ಷಕರಿಗೆ ನೀಡಲಾಗಿರುತ್ತದೆ. |

ಆನಾಸ 51 ಡಿಆರ್‌ಎ 2024

(ಕೆ.ಹೆಚ್. ಮುನಿಯಪ್ಪ)

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು